**CC 2372/2021**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್** 2372/2021

**ಸಿ ಡಬ್ಲೂ -1**

**ಪಿ ಡಬ್ಲೂ -1**

| | |
|---|---|
| **ಸಾಕ್ಷಿಯ ಹೆಸರು -** | **ದೇವೆಂದ್ರಪ್ಪ** |
| **ತಂದೆಯ ಹೆಸರು -** | **ಹನುಮಂತಪ್ಪ** |
| **ವಯಸ್ಸು -** | 54 **ವರ್ಷಗಳು** |
| **ಉದ್ಯೋಗ -** | **ಬಡಗಿತನ** |
| **ವಾಸಸ್ಥಳ -** | **ಕಡ್ಡಿರಾಂಪುರ** |

**ಸಾಕ್ಷಿಯನ್ನು ದಿನಾಂಕಃ** 06-03-2026 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

**1** ನೇ ಆರೋಪಿ ನನ್ನ ಸೋದರ ಮಾವನ ಮಗ. ನನಗೂ ಮತ್ತು ಆರೋಪಿತರಿಗೂ ನೀರಿನ ಪೈಪ್ ವಿಚಾರವಾಗಿ ಬಾಯಿ ಮಾತಿನಲ್ಲಿ ಜಗಳ ಆಗಿತ್ತು. ಆರೋಪಿತರು ನನಗೆ ಹೊಡೆಬಡೆ ಮಾಡಿಲ್ಲ, ಬೈದಿಲ್ಲ ಮತ್ತು ಜೀವ ಬೆದರಿಕೆ ಹಾಕಿಲ್ಲ.

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ದೂರಿನಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ದೂರನ್ನು ನಿಪಿಃ **1** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **1(ಎ)** ಎಂದು ಗುರುತಿಸಲಾಯಿತು. ನಿಪಿಃ **1** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

ಈಗ ನಾನು ನೋಡುತ್ತಿರುವ ಇನ್ನೊಂದು ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಸ್ಥಳ ಪಂಚನಾಮೆ ಮತ್ತು ಜಪ್ತು ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ನಿಪಿಃ **2** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **2(ಎ)** ಎಂದು ಗುರುತಿಸಲಾಯಿತು. ನಿಪಿಃ **2** ಕ್ಕೆ ಪೋಲಿಸ್

ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿಃ **2** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ವಸ್ತುವನ್ನು ಜಪ್ತು ಪಡಿಸಿಕೊಂಡಿಲ್ಲ.

ಈಗ ನಾನು ನೋಡುತ್ತಿರುವ **2** ಪೋಟೋಗಳಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋಗಳನ್ನು ಒಟ್ಟಾಗಿ ನಿಪಿಃ **3** ಎಂದು ಗುರುತಿಸಲಾಯಿತು. ನಿಪಿಃ **3** ರ ಪೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 15-10-2021 ರಂದು ಸಂಜೆ 4.45 ಗಂಟೆಗೆ ನನ್ನ ಖಾಲಿ ಜಾಗದ ಮುಂದೆ ಇದ್ದಾಗ 1 ನೇ ಆರೋಪಿ ಅಲ್ಲಿಗೆ ಬಂದು ನನಗೆ ಅವಾಚ್ಯ ಶಬ್ದಗಳಿಂದ ಬೈದು ಒಂದು ಪ್ಲಾಸ್ಟಿಕ್ ಚೇರ್ ದನಿಂದ ಹಣೆಗೆ ಹೊಡೆದಿರುತ್ತಾನೆ ಅಂದರೆ ಸರಿಯಲ್ಲ. 2 ನೇ ಆರೋಪಿ ಕೈಯಿಂದ ನನ್ನ ಮುಖಕ್ಕೆ ಎದೆಗೆ ಹೊಡೆದಿರುತ್ತಾನೆ ಅಂದರೆ ಸರಿಯಲ್ಲ. ಆರೋಪಿತರು ನನ್ನನ್ನು ಜೀವ ಸಹಿತ ಬಿಡುವುದಿಲ್ಲ ಎಂದು ಬೆದರಿಕೆ ಹಾಕಿದ್ದರು ಅಂದರೆ ಸರಿಯಲ್ಲ. ಸದರಿ ಘಟನೆಗೆ ಸಂಬಂಧಿಸಿದ ನಿಪಿಃ 1 ರ ದೂರು ನೀಡಿರುತ್ತೇನೆ ಅಂದರೆ ಸರಿಯಲ್ಲ.

ದೂರು ನೀಡಿದ ತರುವಾಯಿ ದಿಃ 19-10-2021 ರಂದು ನಾನು ಗುನ್ನಾ ಸ್ಥಳವನ್ನು ತೋರಿಸಿದಾಗ ಚಾಸಾ -2 ಮತ್ತು 3 ರವರ ಸಮಕ್ಷಮ ಪೋಲಿಸರು ನಿಪಿಃ 2 ರಂತೆ ಪಂಚನಾಮೆ ಕ್ರಮ ಜರುಗಿಸಿ ಪ್ಲಾಸ್ಟಿಕ್ ಚೇರ್ ಅನ್ನು ಜಪ್ತು

ಪಡಿಸಿಕೊಂಡಿದ್ದರು ಅಂದರೆ ಸರಿಯಲ್ಲ. ಆಗಲೇ ನಿಪಿಃ 3 ರ ಪೋಟೋ ತೆಗೆಯಲಾಗಿತ್ತು ಅಂದರೆ ಸರಿಯಲ್ಲ.

ಆರೋಪಿತರು ನನ್ನ ವಿರುದ್ದ ಸಿಸಿ 2371/2021 ಎಂಬ ಪ್ರಕರಣ ದಾಖಲಿಸಿರುತ್ತಾನೆ ಅಂದರೆ ಸರಿ. 2 ಪ್ರಕರಣಗಳಲ್ಲಿ ರಾಜಿ ಮಾಡಿಕೊಂಡಿರುತ್ತೇವೆ ಅಂದರೆ ಸರಿ. ರಾಜಿ ಮಾಡಿಕೊಂಡ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಎ.ಎಂ.ಎಸ್ ವಕೀಲರಿಂದಃ** ಇಲ್ಲಾ

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.